# ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು:560001**

**ಸಂಖ್ಯೆ: ಸಹನಿಶಾಶಿ.ಆಶಾ/ಕ.ವ.ಕು.ಜಾ.ಸು/32544/ಇ.ವಿ.2020** **ದಿನಾಂಕ: 02-4-2020**

**ಸುತ್ತೋಲೆ**

ವಿಷಯ: 2019-20ನೇ ಸಾಲಿಗೆ 7 ರಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಪರೀಕ್ಷೆ ರದ್ದುಪಡಿಸಿರುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 13-3-2020, 14-3-2020, 26.3.2020

******

Novel Corona Virus (COVID-19)ನ ವೈರಸ್ ಸೋಂಕು ತಡಗಟ್ಟುವಿಕೆಗೆ ಮುಂಜಾಗ್ರತ ಕ್ರಮವಾಗಿ 1 ರಿಂದ 6ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ರದ್ದುಪಡಿಸಿದ್ದು, 2019-20ನೇ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳು FA-1, FA-2, FA-3, FA-4 ಮತ್ತು SA-1 ರಲ್ಲಿ ಗಳಿಸಿರುವ ಅಂಕಗಳ ಆಧಾರದ ಮೇಲೆ ಶ್ರೇಣೀಕೃತ ಫಲಿತಾಂಶವನ್ನು ಪ್ರಕಟಿಸಿ ಮುಂದಿನ ತರಗತಿಗೆ ತೇರ್ಗಡೆಗೊಳಿಸುವಂತೆ ಈಗಾಗಲೇ ಉಲ್ಲೇಖ(1)ರ ಸುತ್ತೋಲೆ ದಿನಾಂಕ: 13-3-2020ರಲ್ಲಿ ಸೂಚಿಸಲಾಗಿದೆ.

ಉಲ್ಲೇಖ (1)ರ ಸುತ್ತೋಲೆ ದಿನಾಂಕ: 26-3-2020ರಲ್ಲಿ 7 ರಿಂದ 9 ನೇ ತರಗತಿಯ ವಿದ್ಯಾರ್ಥಿಗಳಿಗೆ ದಿನಾಂಕ:20-4-2020ರವರೆಗೆ ಪರೀಕ್ಷಾ ಪೂರ್ವಸಿದ್ಧತಾ ರಜೆಯನ್ನು ಘೋಷಿಸಿದ್ದು, ಪರೀಕ್ಷಾ ವೇಳಾ ಪಟ್ಟಿಯನ್ನು ನಂತರದ ದಿನಗಳಲ್ಲಿ ಪ್ರಕಟಿಸುವುದಾಗಿ ಸೂಚಿಸಲಾಗಿತ್ತು.

ಮುಂದುವರೆದು, ದಿನಾಂಕ: 02-04-2020ರಂದು ಸನ್ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ, ರಾಜ್ಯದಲ್ಲಿ ಕೊರೋನಾ ವೈರಸ್ ಸೋಂಕು ಹರಡುತ್ತಿರುವುದು ಮುಂದುವರೆಯುತ್ತಿರುವ ಹಿನ್ನೆಲೆಯಲ್ಲಿ 7 ಮತ್ತು 8ನೇ ತರಗತಿಯ ವಿದ್ಯಾರ್ಥಿಗಳಿಗೂ ಸಹ 2019-20ನೇ ಸಾಲಿಗೆ ಪರೀಕ್ಷೆಗಳನ್ನು ರದ್ದುಪಡಿಸಿದ್ದು, ಸದರಿ ವಿದ್ಯಾರ್ಥಿಗಳಿಗೆ ಯಾವುದೇ ಷರತ್ತುಗಳನ್ನು ವಿಧಿಸದೇ ಮುಂದಿನ ತರಗತಿಗೆ ಉತ್ತೀರ್ಣಗೊಳಿಸುವುದು ಹಾಗೂ ಸದರಿ ವಿದ್ಯಾರ್ಥಿಗಳಿಗೆ 2019-20ನೇ ಶೈಕ್ಷಣಿಕ ಸಾಲಿನಲ್ಲಿ ಈಗಾಗಲೇ ನಡೆಸಿರುವ ರೂಪಾತ್ಮಕ (ಫಾರಮೆಟಿವ್) ಹಾಗೂ ಸಂಕಲಾತ್ಮಕ (ಸಮ್ಮೆಟಿವ್) ಮೌಲ್ಯ ಮಾಪನದ ಆಧಾರದ ಮೇಲೆ ಶ್ರೇಣೀಕೃತ ಫಲಿತಾಂಶವನ್ನು ಪ್ರಕಟಿಸುವುದು.

9ನೇ ತರಗತಿ ವಿದ್ಯಾರ್ಥಿಗಳನ್ನು ಶಾಲೆಯು ಈಗಾಗಲೇ ನಡೆಸಿರುವ ರೂಪಾತ್ಮಕ (ಫಾರಮೆಟಿವ್) ಹಾಗೂ ಸಂಕಲಾತ್ಮಕ (ಸಮ್ಮೆಟಿವ್) ಮೌಲ್ಯ ಮಾಪನದ ಪರೀಕ್ಷೆಗಳ ಮೌಲ್ಯಮಾಪನದ ಆಧಾರದ ಮೇಲೆ

ಮುಂದಿನ ತರಗತಿಗೆ ಉತ್ತೀರ್ಣಗೊಳಿಸುವುದು. ಆದರೆ, ಯಾವುದೇ ವಿದ್ಯಾರ್ಥಿಯು ಈ ಆಂತರಿಕ ಮೌಲ್ಯಮಾಪನದಲ್ಲಿ ಉತ್ತೀರ್ಣರಾಗದೇ ಇದ್ದಲ್ಲಿ, ಶಾಲೆಗಳು ಈ ರಜಾ ಅವಧಿಯನ್ನು ಅಂತಹ ವಿದ್ಯಾರ್ಥಿಯ ಕಲಿಕೆಯ ಮಟ್ಟವನ್ನು ಉತ್ತಮಗೊಳಿಸುವ ಪ್ರಯತ್ನಕ್ಕೆ ಬಳಸಿಕೊಳ್ಳುವುದು ಹಾಗೂ ಮುಂದಿನ ಶೈಕ್ಷಣಿಕ ಸಾಲಿನ ಆರಂಭದ ಮುನ್ನ ಸದರಿ ವಿದ್ಯಾರ್ಥಿಗಳಿಗೆ ಆನ್‌ಲೈನ್ ಅಥವಾ ಆಫ್‌ಲೈನ್ ಮೂಲಕ ಮೌಲ್ಯಂಕನ ಪರೀಕ್ಷೆಯನ್ನು ಬರೆಯುವ ಅವಕಾಶವನ್ನು ಒದಗಿಸಿ ಮುಂದಿನ ತರಗತಿಗೆ ಉತ್ತೀರ್ಣಗೊಳಿಸುವ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುವುದು

2/4/20

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
3. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಸೂಕ್ತ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

**ಪ್ರತಿಯನ್ನು**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಸನ್ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಮಾಹಿತಿಗಾಗಿ.